15-16

ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** M/s Fortune Five Hydel Projects Private Limited ರವರಿಗೆ ಹಂಚಿಕೆಯಾಗಿರುವ 15 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Matrix Wind Energy Private Limited ಕಂಪನಿಗೆ ವರ್ಗಾಯಿಸಲು ಹಾಗೂ ತದನಂತರ ಸದರಿ 15 ಮೆ.ವ್ಯಾ. ಸಾಮರ್ಥ್ಯವನ್ನು 50 ಮೆ.ವ್ಯಾ.ಗೆ ಹೆಚ್ಚಿಸಿ, ಯೋಜನೆಗೆ ಕಾಲಾವಕಾಶ ನೀಡುವ ಕುರಿತು.

**ಓದಲಾಗಿದೆ:** 1) ಸರ್ಕಾರಿ ಆದೇಶ ಸಂಖ್ಯೆ: ಇಎನ್ 316 ಎನ್‌ಸಿಇ 2006 ದಿನಾಂಕ: 16.10.2006.

2) ವ್ಯವಸ್ಥಾಪಕ ನಿರ್ದೇಶಕರ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ಪತ್ರ ಸಂಖ್ಯೆ: KRED/08/MWEPL-15 MW to 50 MW (FFHPPL-15 MW/2015/1663 ದಿನಾಂಕ: 22.05.2015.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದಲ್ಲಿ ಮೆ: Fortune Five Hydel Projects (P) Limited ರವರಿಗೆ ಬಿಜಾಪುರ ಜಿಲ್ಲೆಯ ವಿವಧ ಪ್ರದೇಶಗಳಲ್ಲಿ 62.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿತ್ತು.

ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಸರ್ಕಾರಕ್ಕೆ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಏಕ ಕಡತ ಪದ್ಧತಿಯಲ್ಲಿ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ, M/s Fortune Five Hydel Projects Private Limited ಕಂಪನಿಯವರಿಗೆ ದಿನಾಂಕ: 16.10.2006ರ ಆದೇಶದಲ್ಲಿ ಬಿಜಾಪುರ ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ಹಂಚಿಕೆಗೊಂಡಿರುವ 62.00 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಪೈಕಿ, ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ಗೊಳಸಂಗಿ, ಹೆಬ್ಬಾಳ್, ಬಿದ್ನಾನಾಳ್ ಮತ್ತು ಹಂಗರಗಿ ಗ್ರಾಮಗಳಲ್ಲಿ ಹಂಚಿಕೆಯಾಗಿರುವ ಅಂಶಿಕ 15 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು M/s Matrix Wind Energy Private Limited ಕಂಪನಿಗೆ ವರ್ಗಾಯಿಸಿ, ನಂತರ ಸದರಿ ಯೋಜನೆಯ ಸಾಮರ್ಥ್ಯವನ್ನು 50 ಮೆ.ವ್ಯಾ.ಗೆ ಹೆಚ್ಚಿಸಿ, ಯೋಜನೆಯ ಅನುಷ್ಠಾನಕ್ಕೆ ದಿನಾಂಕ: 31.03.2017 ರವರೆಗೆ ಕಾಲಾವಕಾಶ ನೀಡುವಂತೆ ಕೋರಿ ಅಭಿವೃದ್ಧಿದಾರರು DPR ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯನ್ನು ಪರಿಗಣಿಸಬಹುದೆಂದು ಶಿಫಾರಸ್ಸು ಮಾಡುತ್ತಾ, ಯೋಜನೆಗೆ ಸಂಬಂಧಿಸಿದಂತೆ ಅಭಿವೃದ್ಧಿದಾರರು ನಿಗದಿತ ವರ್ಗಾವಣೆ ಶುಲ್ಕ, ಸಾಮರ್ಥ್ಯ ಹೆಚ್ಚಳ ಶುಲ್ಕ ಮತ್ತು ಕಾಲಾವಧಿ ವಿಸ್ತರಣಾ ಶುಲ್ಕ ಪಾವತಿಸಿರುವುದಾಗಿ ತಿಳಿಸುತ್ತಾ, ಯೋಜನೆಗೆ ಸಂಬಂಧಿಸಿದ ತಾಂತ್ರಿಕ ಮಾಹಿತಿಯೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 161 ಎನ್‌ಸಿಇ 2015,**
**ಬೆಂಗಳೂರು, ದಿನಾಂಕ: 25.7.2015.**

M/s. Fortune Five Hydel Projects Private Limited ಕಂಪನಿಯವರಿಗೆ ಬಿಜಾಪುರ ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ಹಂಚಿಕೆಯಾಗಿರುವ 62.00 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಪೈಕಿ, ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ಗೊಳಸಂಗಿ, ಹೆಬ್ಬಾಳ್, ಬಿದ್ನಾನಾಳ್ ಮತ್ತು ಹಂಗರಗಿ ಗ್ರಾಮಗಳಲ್ಲಿ ಹಂಚಿಕೆಯಾಗಿರುವ ಅಂಶಿಕ 15 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು

Wind ...
15661
Date 10-08-15

---2)

M/s. Matrix Wind Energy Private Limited ಕಂಪನಿಗೆ ವರ್ಗಾಯಿಸಿ, ಈ ಕೆಳಗಿನ ಷೆಡ್ಯೂಲ್‌ನಲ್ಲಿ ನಮೂದಿಸಲಾಗಿರುವ ಯೋಜನೆಯ ಸಾಮರ್ಥ್ಯವನ್ನು 50 ಮೆ.ವ್ಯಾ.ಗೆ ಹೆಚ್ಚಿಸಿ, ಈ ಯೋಜನೆಯ ಅನುಷ್ಠಾನಕ್ಕೆ ದಿನಾಂಕ 31.03.2017 ರವರೆಗೆ ಕಾಲಾವಧಿ ವಿಸ್ತರಿಸಿ ಕೆಳಕಂಡ ಷರತ್ತುಗೊಳಪಟ್ಟು ಆದೇಶಿಸಲಾಗಿದೆ:-

Schedule

| Topo sheet No | Nearby Villages of the proposed area and district | Geographical areas description of the project | Sanctioned/Transfer capacity in MW | Enhancement proposed in MW | Total capacity (No.of WTGs & rating in kW |
|---|---|---|---|---|---|
| 47 P/15 | Golsangi, Hebbal, Bidnal, Hangargi, Bijapur district | The proposed area is a groud level plain with NS orientation and part of it has S-W orientation. It is spread across the villages as mentioned in Column 4. The area has gentle raise with average elevation of about 585m. It is held in the following Geographical co-ordinates:<br>**Latitude**: 16°25'0''-16°30'0''N<br>**Longitude**: 75°55'0''- 76°0'0'' E<br>**Ridge peaks**: 588, 567,557.2, 565.3, 550,571,578,561.2, 577, 590, 587, 599,583, 579, 603, 598 & 584 m Amsl | 15 MW | 35 MW | 50 MW (25 x 2000KW) |

1 M/s Matrix Wind Energy Private Limited ಕಂಪನಿಯು ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ 45 ದಿನಗಳ ಒಳಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 M/s Matrix Wind Energy Private Limited ಕಂಪನಿಯು ಈ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ಅನ್ನು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಗೆ ಮಾರಾಟ ಮಾಡುವ ಅಥವಾ Wheeling & Banking ಮೂಲಕ 3 ನೇ ವ್ಯಕ್ತಿಗೆ ಮಾರಾಟ ಮಾಡುವ ಕುರಿತು ಸಂಬಂಧಿಸಿದ ಎಸ್ಕಾಂನೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳತಕ್ಕದ್ದು.

3 ಸದರಿ ಯೋಜನೆ ದಿನಾಂಕ: 31.3.2017 ರೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

4 ಅಭಿವೃದ್ಧಿದಾರರು ಯೋಜನೆಗೆ ಸಂಬಂಧಿಸಿದಂತೆ ನಿಯಮಾನುಸಾರ ಪಾವತಿಸಬೇಕಾಗಿರುವ ಎಲ್ಲಾ ತರಹದ ಶುಲ್ಕವನ್ನು ಕ್ರೆಡಲ್‌ಗೆ ಪಾವತಿಸತಕ್ಕದ್ದು.

5 ಈ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಮೂಲ ಹಂಚಿಕೆ ಆದೇಶದಲ್ಲಿನ ಮತ್ತು ಯೋಜನೆಗೆ ಸಂಬಂಧಿಸಿದಂತೆ ಹೊರಡಿಸಲಾಗಿರುವ ಇತರೆ ಎಲ್ಲಾ ಆದೇಶಗಳಲ್ಲಿನ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☏ 22034674.

25/7/15

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ ವಿಕಾಸ ಸೌಧ, ಬೆಂಗಳೂರು-1.

2 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.

6 ಜಿಲ್ಲಾಧಿಕಾರಿಗಳು, ಬಿಜಾಪುರ ಜಿಲ್ಲೆ, ಬಿಜಾಪುರ.

7 ಉಪ ಅರಣ್ಯ ಸಂರಕ್ಷಣಾಧಿಕಾರಿ ಬಿಜಾಪುರ ಜಿಲ್ಲೆ, ಬಿಜಾಪುರ.

8 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ

9 M/s Matrix Wind Energy Private Limited. 8-2-277/12, No. 296, Road No 3, UBI Col Banjara Hills, Hyderabad-500034.

10 M/s Fortune Five Hydel Projects Private Limited, 701-702, Prestige Maridian-2, No. 30, MG Road, Bengaluru-560 001.

10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.